# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಧಾರವಾಡ ಜಿಲ್ಲೆಯ ಕುಂದಗೋಳ ತಾಲ್ಲೂಕಿನ ಯರಗುಪ್ಪಿ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀಯುತ ಧರ್ಮದಾಸ್ ಕಾಲವಾಡ ರವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

1) ನಿಬಂಧಕರು, ಎ.ಆರ್.ಎಲ್.ಓ.-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/UPLOK/BGM-167/2012/ARE-5, ದಿನಾಂಕ:22.10.2016
2) ಸರ್ಕಾರದ ಸಮಸಂಖ್ಯೆಯ ಪತ್ರ, ದಿನಾಂಕ 28.10.2016

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಎ.ಆರ್.ಇ.-5, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು-1 ರವರು ದಿನಾಂಕ: 21.10.2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಕುತುಬುದ್ದೀನ್ ಇಮಾಮ್‌ಸಾಬ್ ಬೆಳಗಲಿ, ಯರಗುಪ್ಪಿ ಗ್ರಾಮ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು, ಧಾರವಾಡ ಜಿಲ್ಲೆಯ ಕುಂದಗೋಳ ತಾಲ್ಲೂಕಿನ ಯರಗುಪ್ಪಿ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀಯುತ ಧರ್ಮದಾಸ್ ಕಾಲವಾಡ ಹಾಗೂ ಅಧ್ಯಕ್ಷರಾದ ಶ್ರೀಯುತ ಈರಣ್ಣ ಸಹದೇವಪ್ಪ ಅಕ್ಕಿ (ಇನ್ನು ಮುಂದೆ ಕ್ರಮವಾಗಿ 'ಎದುರುದಾರರು 1 ಮತ್ತು 2' ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ಅವ್ಯವಹಾರ ಎಸಗಿರುವ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದು, ತನಿಖಾ ವರದಿಯ ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರ-1 ರವರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ, ಎದುರುದಾರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರ ಅನ್ವಯ ದುರ್ನಡತೆ/ ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಹಾಗೂ ಎದುರುದಾರ-2 ರವರ ವಿರುದ್ಧ ಕರ್ನಾಟಕ ಗ್ರಾಮಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರನ್ವಯ ಕ್ರಮ ಜರುಗಿಸಿ, ಯರಗುಪ್ಪಿ ಗ್ರಾಮ ಪಂಚಾಯತಿಯಲ್ಲಿ ಎದುರುದಾರ-2 ರವರು ಹೊಂದಿರುವ ಯಾವುದೇ ಹುದ್ದೆಯಿಂದ ತೆಗೆದು ಹಾಕಲು ಕ್ರಮವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಎದುರುದಾರ-2 ರವರ ಅವಧಿಯು ಮುಕ್ತಾಯಗೊಂಡಿದ್ದು, ಪ್ರಸ್ತುತ ಯರಗುಪ್ಪಿ ಗ್ರಾಮ ಪಂಚಾಯತಿಯಲ್ಲಿ ಯಾವುದೇ ಹುದ್ದೆಯಲ್ಲಿ ಅಥವಾ ಸದಸ್ಯ ಸ್ಥಾನ ಹೊಂದಿರುವುದಿಲ್ಲ. ಆದುದರಿಂದ ಈ ಪ್ರಕರಣದಲ್ಲಿ ಹಣ ದುರುಪಯೋಗವಾಗಿದ್ದಲ್ಲಿ, ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರನ್ವಯ ಕ್ರಮ ಜರುಗಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಧಾರವಾಡ ಇವರಿಗೆ ಮೇಲೆ ಓದಲಾದ (2) ರಲ್ಲಿ ನಿರ್ದೇಶನ ನೀಡಲಾಗಿದೆ.

ಹಾಗೂ ಈ ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀಯುತ ಧರ್ಮದಾಸ್ ಕಾಲವಾಡ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯರಗುಪ್ಪಿ ಗ್ರಾಮ ಪಂಚಾಯತಿ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 754 ಗ್ರಾಪಂಕಾ 2016, ಬೆಂಗಳೂರು, ದಿನಾಂಕ: 28.10.2016**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಯುತ ಧರ್ಮದಾಸ್ ಕಾಲವಾಡ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯರಗುಪ್ಪಿ ಗ್ರಾಮ ಪಂಚಾಯತಿ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ಪಿ.ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ-1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು ಎ.ಆರ್.ಇ.-5, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಧಾರವಾಡ ಜಿಲ್ಲಾ ಪಂಚಾಯತಿ, ಧಾರವಾಡ.
5) ಕಾರ್ಯನಿರ್ವಾಹಕ ಅಧಿಕಾರಿ, ಕುಂದಗೋಳ ತಾಲ್ಲೂಕು ಪಂಚಾಯತಿ, ಕುಂದಗೋಳ, ಧಾರವಾಡ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6) ಶ್ರೀಯುತ ಧರ್ಮದಾಸ್ ಕಾಲವಾಡ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯರಗುಪ್ಪಿ ಗ್ರಾಮ ಪಂಚಾಯತಿ, ಕುಂದಗೋಳ ತಾಲ್ಲೂಕು, ಧಾರವಾಡ ಜಿಲ್ಲೆ.
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.